76

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರ್ ರವರು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಕಾರ್ಮಿಕ ಇಲಾಖೆಯ ಆದೇಶದಂತೆ ಕನಿಷ್ಠ ವೇತನ ಮಾತ್ರ ಪಾವತಿಸುವಂತೆ ಇತ್ತೀಚೆಗೆ ಪಂಚಾಯತ್ ರಾಜ್ ಆಯುಕ್ತಾಲಯದಿಂದ ಆದೇಶ ಮಾಡಲಾಗಿರುತ್ತದೆ. ಗ್ರಾಮ ಪಂಚಾಯತಿಗಳ ಆಧಾರ ಸ್ಥಂಭವಾಗಿರುವ ಗ್ರಾಮ ಪಂಚಾಯತ್ ನೌಕರರಿಗೆ ಗ್ರಾಮ ಪಂಚಾಯತ್ ಸ್ವಂತ ನಿಧಿಯಿಂದ ಹೆಚ್ಚುವರಿ ವೇತನ ಪಾವತಿಸಲು ಅವಕಾಶ ಇದ್ದರೂ ಕೂಡ ಸದರಿ ಆದೇಶದಂತೆ ನೀಡುತ್ತಿರುವ ಕನಿಷ್ಠ ವೇತನದಿಂದ ಗ್ರಾಮ ಪಂಚಾಯತ್ ನೌಕರರ ಜೀವನ ನಿರ್ವಹಣೆ ತುಂಬಾ ಕಷ್ಟಕರವಾಗಿರುತ್ತದೆ ಹಾಗೂ ಗ್ರಾಮ ಪಂಚಾಯತ್ ನೌಕರರಿಗೆ ESI, PF ಮುಂತಾದ ಸೌಲಭ್ಯವನ್ನು ನೀಡುವಂತೆ ಸರ್ಕಾರ ಆದೇಶಿಸಿದ್ದು, ಈ ನಿಟ್ಟಿನಲ್ಲಿ ಗ್ರಾಮ ಪಂಚಾಯತ್ ನೌಕರರಿಗೆ ESI, PF ಸೌಲಭ್ಯವನ್ನು ಯಾವ ಕಾಲಮಿತಿಯೊಳಗೆ ನೀಡಲು ಕ್ರಮವಹಿಸಲಾಗುತ್ತದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸುವ ಬಗ್ಗೆ.

***

**ಉತ್ತರ:** ಭಾರತ ಸಂವಿಧಾನದ ಅನುಚ್ಛೇದ 242-ಬಿ ರಂತೆ ಗ್ರಾಮ ಪಂಚಾಯಿತಿಯು ರಚನೆಗೊಂಡಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 2(21) ರಂತೆ ಗ್ರಾಮ ಪಂಚಾಯಿತಿಯು ಸ್ಥಳೀಯ ಪ್ರಾಧಿಕಾರವಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020 ಅನ್ನು ರೂಪಿಸಲಾಗಿದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 112 ಮತ್ತು 113 ರಂತೆ ಗ್ರಾಮ ಪಂಚಾಯಿತಿಗಳ ಸಿಬ್ಬಂದಿ ವರ್ಗದ ಸ್ವರೂಪ, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ, ಮರಣ ಮತ್ತು ನಿವೃತ್ತಿ ಉಪದಾನ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 113 ರಲ್ಲಿ ಗ್ರಾಮ ಪಂಚಾಯಿತಿಯು ನೌಕರರನ್ನು ನೇಮಕ ಮಾಡಿಕೊಂಡು ತಮ್ಮ ಸ್ವಂತ ಸಂಪನ್ಮೂಲದಿಂದ ವೇತನವನ್ನು ಪಾವತಿಸಬೇಕಾಗಿರುತ್ತದೆ. ಗ್ರಾಮ ಪಂಚಾಯಿತಿಗಳು ಸರ್ಕಾರದ ಮಾರ್ಗಸೂಚಿ ಅನುಸರಿಸದೆ ಹೆಚ್ಚಿನ ಸಿಬ್ಬಂದಿಗಳನ್ನು ನೇಮಿಸಿಕೊಂಡಿದ್ದರಿಂದ ಅವರಿಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಸುತ್ತಿರಲಿಲ್ಲ. ಗ್ರಾಮ ಪಂಚಾಯತ್ ಸಿಬ್ಬಂದಿಗಳು ತಮಗೆ ಸಮರ್ಪಕವಾಗಿ ಕನಿಷ್ಠ ವೇತನ ಪಾವತಿಯಾಗದಿರುವ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದನ್ನು ಪರಿಗಣಿಸಿ ಮಾರ್ಚ್ 2018 ರಿಂದ ಗ್ರಾಮ ಪಂಚಾಯತ್ ಸಿಬ್ಬಂದಿಗಳಿಗೆ ಸರ್ಕಾರದ ವತಿಯಿಂದಲೇ ಕನಿಷ್ಠ ವೇತನ ಪಾವತಿಸಲಾಗುತ್ತಿದೆ. ಕಾರ್ಮಿಕ ಇಲಾಖೆಯು ಗ್ರಾಮ ಪಂಚಾಯಿತಿ ನೌಕರರಿಗೆ ಕಾಲಕಾಲಕ್ಕೆ ನಿಗದಿಪಡಿಸುವ ಕನಿಷ್ಠ ವೇತನವನ್ನು ನೀಡಲಾಗುತ್ತದೆ.

ಪ್ರಸ್ತುತ 2025-26 ನೇ ಸಾಲಿಗೆ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ವ್ಯತ್ಯಾಸವಾಗುವ ತುಟ್ಟಿಭತ್ಯೆ ಈ ಕೆಳಕಂಡಂತಿದೆ.

| ಕ್ರ. ಸಂ | ಪದನಾಮ | ಕನಿಷ್ಠ ವೇತನ ನೀಡುತ್ತಿರುವ ವಿವರ (ರೂ.ಗಳಲ್ಲಿ) | ವ್ಯತ್ಯಾಸವಾಗುವ ತುಟ್ಟಿಭತ್ಯೆ (ರೂ.ಗಳಲ್ಲಿ) | ಒಟ್ಟು (ರೂ.ಗಳಲ್ಲಿ) |
|---|---|---|---|---|
| 1 | ಬಿಲ್ ಕಲೆಕ್ಟರ್ | 15,196.72 | 2818.80 | 18,015.52 |
| 2 | ಕ್ಲರ್ಕ ಕಂ ಡಾಟಾ ಎಂಟ್ರಿ ಆಪರೇಟರ್ | 15,196.72 | 2818.80 | 18,015.52 |
| 3 | ವಾಟರ್ ಆಪರೇಟರ್ | 13,509.32 | 2818.80 | 16,328.12 |
| 4 | ಅಟೆಂಡಂಟ್ | 12,873.52 | 2818.80 | 15,692.32 |
| 5 | ಕ್ಲೀನರ್ಸ್ | 16,019.52 | 2818.80 | 18838.32 |

ಪಂಚಾಯತ್ ರಾಜ್ ಆಯುಕ್ತಾಲಯದ ಪತ್ರ ಸಂಖ್ಯೆ:ಕಪಂರಾಅ/ಅಭಿವೃದ್ಧಿ/386/2025 ದಿನಾಂಕ:05.05.2025 ರಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಕಾರ್ಮಿಕ ಇಲಾಖೆಯು ನಿಗಧಿಪಡಿಸಿದ ಕನಿಷ್ಠ ಮಾಸಿಕ ಸಂಭಾವನೆ ಪಾವತಿಸುವ ಕುರಿತು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಈ ನಿರ್ದೇಶನದಲ್ಲಿ ಕಾರ್ಮಿಕ ಇಲಾಖೆಯು 2025-26 ನೇಸಾಲಿಗೆ ನಿಗದಿಪಡಿಸಿದಂತೆ ಕನಿಷ್ಠ ವೇತನ ಮಾತ್ರ ಪಾವತಿಸಲು ಹಾಗೂ ನಿಗದಿತ ಕನಿಷ್ಠ ವೇತನಕ್ಕಿಂತ ಹೆಚ್ಚಿನ ವೇತನ ಪಾವತಿಸದಂತೆ ತಿಳಿಸಲಾಗಿರುತ್ತದೆ. ನಂತರದಲ್ಲಿ ಪಂಚಾಯತ್ ರಾಜ್ ಆಯುಕ್ತಾಲಯದ ಪತ್ರ ಸಂಖ್ಯೆ KPRC.GPA/272/2025 ದಿನಾಂಕ: 13.08.2025 ರಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ಪ್ರಸ್ತುತ ಪಾವತಿಸುತ್ತಿರುವ ವೇತನವು ಕಾರ್ಮಿಕ ಇಲಾಖೆಯು ನಿಗದಿಪಡಿಸಿದ ಕನಿಷ್ಠ ವೇತನಕ್ಕಿಂತ ಹೆಚ್ಚಾಗಿದ್ದಲ್ಲಿ ಸದರಿ ವೇತನದಲ್ಲಿ ಸರ್ಕಾರದಿಂದ ಬಿಡುಗಡೆಗೊಳಿಸಿದ ಮೊತ್ತದಲ್ಲಿ ಕನಿಷ್ಠ ವೇತನವನ್ನು ಮಾತ್ರ ಪಾವತಿಸಲು ಮತ್ತು ಹೆಚ್ಚುವರಿ ಮೊತ್ತವನ್ನು ಗ್ರಾಮ ಪಂಚಾಯಿತಿಗಳು ತಮ್ಮ ಸ್ವಂತ ಸಂಪನ್ಮೂಲದ ಅನುದಾನದಲ್ಲಿ ಪಾವತಿಸಲು ಕ್ರಮ ವಹಿಸುವ ಕುರಿತು ನಿಯಮಾನುಸಾರ ಕ್ರಮ ಕೈಗೊಳ್ಳಲು ಸುತ್ತೋಲೆಯನ್ನುಹೊರಡಿಸಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 30 ಗ್ರಾಪಂಸಿ 2008, ದಿನಾಂಕ: 31.10.2008 ರನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಭವಿಷ್ಯ ನಿಧಿ ಯೋಜನೆಯ ಸೌಲಭ್ಯವನ್ನು ಜಾರಿಗೆ ತರಲಾಗಿರುತ್ತದೆ. ಅದರಂತೆ ಸಂಬಂಧಿಸಿದ ಗ್ರಾಮ ಪಂಚಾಯಿತಿ ಸಿಬ್ಬಂದಿ ತಾವು ಪಡೆಯುತ್ತಿರುವ ಕನಿಷ್ಠ ವೇತನ ಹಾಗೂ ತುಟ್ಟಿ ಭತ್ಯೆಯ ಶೇ.10 ರಷ್ಟು ವಂತಿಗೆಯನ್ನು ಪ್ರತಿ ತಿಂಗಳು ಪಾವತಿಸಬೇಕಿರುತ್ತದೆ ಹಾಗೂ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳು Employer Contribution ಆಗಿ ಪ್ರತಿ ತಿಂಗಳು ನೌಕರರ ವಂತಿಗೆಗೆ ಸಮನಾದ ಅಂದರೆ ಶೇ. 10 ರಷ್ಟು ವಂತಿಗೆಯನ್ನು ಪಾವತಿಸಬೇಕಿರುತ್ತದೆ.

ಕನಿಷ್ಠ ವೇತನದೊಂದಿಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳು ಈ ಕೆಳಕಂಡಂತಿವೆ.

1) ಗ್ರಾಮ ಪಂಚಾಯಿತಿ ನೌಕರರಿಗೆ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ಮಹಿಳಾ ನೌಕರರಿಗೆ 180 ದಿನಗಳ ಪ್ರಸೂತಿ ರಜೆ ಮತ್ತು ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ನೀಡಲಾಗುತ್ತದೆ.

2) ಗ್ರಾಮ ಪಂಚಾಯಿತಿ ಸಿಬ್ಬಂದಿಯು ಸೇವೆಯಲ್ಲಿದ್ದಾಗ ಮರಣ ಹೊಂದಿದಲ್ಲಿ ಅವರ ನ್ಯಾಯಬದ್ಧ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

3) ಪ್ರಸ್ತುತ ಸೇವೆಯಿಂದ ನಿವೃತ್ತಿಯಾಗುವ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಅಥವಾ ಸೇವೆಯಲ್ಲಿ ಮರಣ ಹೊಂದಿದ ಸಿಬ್ಬಂದಿಯ ನ್ಯಾಯಬದ್ಧ ಅವಲಂಬಿತರಿಗೆ ಅವರು ಸಲ್ಲಿಸಿದ ಸೇವಾ ಅವಧಿಯ ಆಧಾರದ ಮೇಲೆ ಒಂದು ವರ್ಷದ ಸೇವೆಗೆ 15 ದಿನಗಳ ವೇತನದಂತೆ ಸೇವಾ ಅವಧಿಯ ಗರಿಷ್ಠ 20 ತಿಂಗಳ ವೇತನ ಮೀರದಂತೆ ನಿವೃತ್ತಿ ಹಾಗೂ ಮರಣೋತ್ತರ ಉಪದಾನಗಳನ್ನು ನೀಡಲಾಗುತ್ತಿದೆ.

4) ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಗ್ರಾಮ ಪಂಚಾಯತಿ ನೌಕರರು ಸೇವೆಯಲ್ಲಿರುವಾಗಲೇ ಮೃತರಾದರೆ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಶವಸಂಸ್ಕಾರಕ್ಕೆ ರೂ.10.000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಗ್ರಾಮ ಪಂಚಾಯತಿ ಸಂಪನ್ಮೂಲದಿಂದ ಭರಿಸಲು ಅವಕಾಶ ಕಲ್ಪಿಸಲಾಗಿದೆ.

5) ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರಿಗೆ ಅನಿರೀಕ್ಷಿತ ಸಂದರ್ಭಗಳಲ್ಲಿ ಅಪಘಾತಗಳಾಧಲ್ಲಿ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಆರ್ಥಿಕ ಭದ್ರತೆ ಒದಗಿಸುವ ಹಿತದೃಷ್ಟಿಯಿಂದ ಈ ಕೆಳಕಂಡ ಪ್ರಧಾನ ಮಂತ್ರಿಯವರ "ಜನ್‌ಧನ್" ಯೋಜನೆಯಡಿಯ ವಿಮಾ ಪಾಲಿಸಿಗಳನ್ನು ಕಡ್ಡಾಯವಾಗಿ ಮಾಡಿಸಲು ಮತ್ತು ಸಂಬಂಧಿಸಿದ ಸಿಬ್ಬಂದಿಗಳ ವೇತನದ ಬ್ಯಾಂಕ್ ಖಾತೆಗೆ ಲಿಂಕ್ ಮಾಡಿಸಿ, ವಾರ್ಷಿಕವಾಗಿ ಕಟಾವಣೆ ಮಾಡಲು ಅಗತ್ಯ ಕ್ರಮಕೈಗೊಳ್ಳಲು ಗ್ರಾಮ ಪಂಚಾಯಿತಿಗಳಿಗೆ ತಿಳಿಸಲಾಗಿದೆ.

   1) ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಭೀಮಾ ಯೋಜನೆ
   2) ಪ್ರಧಾನ ಮಂತ್ರಿ ಸುರಕ್ಷಾ ಜ್ಯೋತಿ ಭೀಮಾ ಯೋಜನೆ
   3) ಭಾರತೀಯ ಸ್ಟೇಟ್ ಬ್ಯಾಂಕ್‌ನ ಗ್ರೂಪ್ ಫರ್ಸನಲ್ ಆಕ್ಸಿಡೆಂಟ್ ಇನ್‌ಶ್ಯೂರೆನ್ಸ್

6) 2020 ರ ಕೋವಿಡ್ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಕೋವಿಡ್ ನಿಯಂತ್ರಣಕ್ಕಾಗಿ ಶ್ರಮಿಸುತ್ತಿದ್ದ ವೇಳೆ ಕೋವಿಡ್ ಸೋಂಕಿನಿಂದ ಮೃತಪಟ್ಟ ಸಂದರ್ಭದಲ್ಲಿ ಸರ್ಕಾರವು ಅವರಿಗೆ 30 ಲಕ್ಷ ರೂ ಪರಿಹಾರ ಘೋಷಿಸಿತ್ತು. ಘೋಷಿಸಲಾದ ಪರಿಹಾರ ಪಾವತಿಗೆ ಪ್ರತ್ಯೇಕ ಲೆಕ್ಕ ಶೀರ್ಷಿಕೆ ಇರಲಿಲ್ಲ. ಈ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತ್ ನೌಕರರು ಕೋವಿಡ್-19 ಕರ್ತವ್ಯ ನಿರ್ವಹಿಸುತ್ತಿದ್ದಾಗ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಮರಣ ಹೊಂದಿದ್ದಲ್ಲಿ ಅವರ ಕುಟುಂಬದವರಿಗೆ 30 ಲಕ್ಷ ರೂ. ಪರಿಹಾರ ನೀಡಲು ಅಥವಾ ಕೋವಿಡ್-19 ಸಾಂಕ್ರಾಮಿಕದಿಂದಾಗಿ ಅನಾರೋಗ್ಯಗೊಂಡಲ್ಲಿ ಸದರಿ ಚಿಕಿತ್ಸೆಗಾಗಿ ತಗಲುವ ವೈದ್ಯಕೀಯ ವೆಚ್ಚ ಭರಿಸಲು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಆಶ್ವಾಸನೆ ನಿಧಿಯನ್ನು ಸ್ಥಾಪಿಸಿ ಪರಿಹಾರ ನೀಡಲು ತಿಳಿಸಲಾಗಿದೆ.

7) ಗ್ರಾಮ ಪಂಚಾಯತಿ ನೌಕರರಿಗೆ ತೀವ್ರ ಸ್ವರೂಪದ ಕಾಯಿಲೆಗಳಾದ ಹೃದ್ರೋಗ ಶಸ್ತ್ರ ಚಿಕಿತ್ಸೆ, ಕ್ಯಾನ್ಸರ್, ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್, ಡಯಾಲಿಸಿಸ್ ಮತ್ತು ಮೂತ್ರಪಿಂಡ ಕಾಯಿಲೆಗಳಿಗೆ ತುತ್ತಾದಲ್ಲಿ ವೈದ್ಯಕೀಯ ವೆಚ್ಚ ಗರಿಷ್ಠ ರೂ. 50,000/- ಗಳನ್ನು ಪಾವತಿಸಲು ಆದೇಶಿಸಲಾಗಿದೆ.

8) ಸರ್ಕಾರದ ಆದೇಶ ದಿನಾಂಕ:24.06.2025 ರಲ್ಲಿ 2025-26 ನೇ ಸಾಲಿನ ಆಯವ್ಯಯ ಘೋಷಣೆ ಸಂಖ್ಯೆ 140 ರಂತೆ ಸರ್ಕಾರದ ವಿವಿಧಇಲಾಖೆಗಳಲ್ಲಿ ಗುತ್ತಿಗೆ / ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ 3 ಲಕ್ಷಕ್ಕೂ ಅಧಿಕ ಸಿಬ್ಬಂದಿ ಹಾಗೂ ಅವಲಂಭಿತರಿಗೆ 5 ಲಕ್ಷರೂ.ವರೆಗೆ ನಗದು ರಹಿತ ಆರೋಗ್ಯ ಭರವಸೆಗಾಗಿ"ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ – ಖಾಯಂ ಅಲ್ಲದ ಸಿಬ್ಬಂದಿಗಳಿಗೆ [Karnataka Arogya Suraksha Sanjeevini – Non – Permanent Employees (KASS-NPE)] ಯೋಜನೆಗೆ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಈ ಯೋಜನೆಯಡಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 45050 ಗ್ರಾಮ ಪಂಚಾಯಿತಿ ಸಿಬ್ಬಂದಿ ಮತ್ತು ಇವರುಗಳ ಅವಲಂಬಿತರಿಗೆ ಆರೋಗ್ಯ ಭದ್ರತೆ ನೀಡಲು ಯೋಜನೆ ರೂಪಿಸಲಾಗಿದ್ದು, ಸಿಬ್ಬಂದಿಗಳ ಅವಲಂಬಿತರ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.

9) ಸೇವಾ ಹಿರಿತನದ ಆಧಾರದ ಮೇಲೆ ವೇತನ ನಿಗಧಿಪಡಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿ ಇರುತ್ತದೆ.

10) ಬಿಲ್ ಕಲೆಕ್ಟರ್ ಮತ್ತು ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ವೃಂದದಲ್ಲಿ ಮಂಜೂರಾದ ಹುದ್ದೆ ಖಾಲಿ ಇದ್ದಲ್ಲಿ, ವಾಟರ್ ಆಪರೇಟರ್/ ಅಟೆಂಡೆಂಟ್/ ಕ್ಲೀನರ್ಸ್ ವೃಂದದಿಂದ ಸಂಯುಕ್ತ ಜೇಷ್ಠತಾ ಪಟ್ಟಿ ಆಧಾರದ ಮೇಲೆ ಗ್ರಾಮ ಪಂಚಾಯಿತಿಯು ಮುಂಬಡ್ತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

11) ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ /ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ ಸೇವೆಯೊಳಗಿನ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಇರುವ ಹುದ್ದೆಗಳಿಗನುಸಾರವಾಗಿ ಬಿಲ್‌ಕಲೆಕ್ಟರ್ / ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ನೌಕರರಿಂದ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ.

**ಸಂಖ್ಯೆ: ಗ್ರಾಅಪ 597 ಗ್ರಾಪಂಅ 2025**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.